Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in** **principal@klsvdit.edu.in**

KLS/VDIT/ 649/2021-22 Date: 29-01-2022

**ಪತ್ರಿಕಾ ಪ್ರಕಟಣೆ:**

## ಮಾವಿನ ಹಣ್ಣುಗಳ ವರ್ಗೀಕರಣ ತಂತ್ರಜ್ಞಾನ: ಪೇಟೆಂಟ್ ದಾಖಲು

ಕರ್ನಾಟಕ ಲಾ ಸೊಸೈಟಿಯ ವಿಶ್ವನಾಥರಾವ್ ದೇಶಪಾಂಡೆ ತಾಂತ್ರಿಕ ಮಹಾವಿದ್ಯಾಲಯ ಹಳಿಯಾಳದ ಮೆಕ್ಯಾನಿಕಲ್ ಇಂಜನಿಯರಿಂಗ್ ವಿಭಾಗದ ಉಪನ್ಯಾಸಕರಾದ ಡಾ. ಶೈಲೇಶ ಚನ್ನಪಟ್ಟಣ ಅವರು ಮಾವಿನ ಹಣ್ಣುಗಳ ವಿನೂತನ ವರ್ಗೀಕರಣ ವಿಧಾನ ಅಭಿವೃದ್ಧಿಪಡಿಸುವ ಮೂಲಕ ಪೇಟೆಂಟ್ (ಬೌದ್ಧಿಕ ಆಸ್ತಿ ಹಕ್ಕು) ಪಡೆದುಕೊಂಡಿದ್ದಾರೆ.

ಕೇಂದ್ರ ಕೈಗಾರಿಕೆ ಮತ್ತು ಆಂತರಿಕ ವ್ಯವಹಾರ ಸಚಿವಾಲಯ ಬಿಡುಗಡೆಗೊಳಿಸಿದ ಜನವರಿ 2022 ರ ಪೇಟೆಂಟ್ ಜರ್ನಲ್‌ನಲ್ಲಿ ಈ ಸಂಶೋಧನೆ ದಾಖಲಾಗಿದೆ. ಮಾರುಕಟ್ಟೆಯಲ್ಲಿ ಗುಣಮಟ್ಟದ ಮಾವಿನ ಹಣ್ಣುಗಳ ಬೇಡಿಕೆ ಹೆಚ್ಚಿರುವುದರಿಂದ ಸಗಟು ಪ್ರಮಾಣದ ಹಣ್ಣುಗಳನ್ನು ಗುಣಮಟ್ಟದ ಆಧಾರದಲ್ಲಿ ವರ್ಗೀಕರಿಸುವುದು ಅವಶ್ಯವಾಗಿದೆ. ಈ ಸಂಶೋಧನೆಯಲ್ಲಿ ಐ.ಓ.ಟಿ, ಕೃತಕ ಬುದ್ಧಿಮತ್ತೆ ಮತ್ತು ನ್ಯೂರಲ್ ನೆಟ್ವರ್ಕ್ ತಂತ್ರಜ್ಞಾನ ಬಳಸಿಕೊಂಡು ಬಣ್ಣ, ಗಾತ್ರ ಮತ್ತು ಆಕಾರದ ಆಧಾರದ ಮೇಲೆ ಹಣ್ಣುಗಳ ವರ್ಗೀಕರಣವನ್ನು ಸ್ವಯಂಚಾಲಿತವಾಗಿ ಮಾಡಲಾಗುತ್ತದೆ.

ಪೇಟೆಂಟ್ ದಾಖಲಿಸಿದ ಈ ಸಂಶೋಧನೆಯ ಕುರಿತು ಮಹಾವಿದ್ಯಾಲಯದ ಆಡಳಿತ ಮಂಡಳಿ ಅಧ್ಯಕ್ಷರಾದ ಶ್ರೀ. ವಿನಾಯಕ ಲೋಕುರ್, ಪ್ರಾಂಶುಪಾಲರಾದ ಡಾ. ವಿ ಎ ಕುಲಕರ್ಣಿ, ಸಂಶೋಧನಾ ವಿಭಾಗ ಮುಖ್ಯಸ್ಥರಾದ ಡಾ. ಮಹೇಂದ್ರ ದೀಕ್ಷಿತ್, ಮೆಕ್ಯಾನಿಕಲ್ ವಿಭಾಗ ಮುಖ್ಯಸ್ಥರಾದ ಡಾ. ಕೆ ಎಸ್ ಪೂಜಾರ್ ಮತ್ತು ಎಲ್ಲ ಸಿಬ್ಬಂದಿ ವರ್ಗದವರು ಶ್ಲಾಘನೆ ವ್ಯಕ್ತಪಡಿಸಿದ್ದಾರೆ.

ಪ್ರಾಂಶುಪಾಲರು

Principal
KLS Vishwanathrao Deshpande
Institute of Technology, Haliyal




ಡಾ. ಶೈಲೇಶ್ ಚನ್ನಪಟ್ಟಣ